ಕರ್ನಾಟಕ ಸರ್ಕಾರ

ಜಿಲ್ಲಾ ಪಂಚಾಯತ, ಬೆಳಗಾವಿ

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಳಗಾವಿ.

ಈ ಮೇಲ್-dobcmbelgaumm@gmail.com

ನಂ:ಜಿಹಿಂವಕಇಬೆ/ಸಿಬ್ಬಂದಿ/2022-23 ದೂರವಾಣಿ ಸ:0831-2407247

ದಿನಾಂಕ:16/05/2022

# ಸುತ್ತೋಲೆ

ವಿಷಯ:- 2022-23 ನೇ ಸಾಲಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿನ ಗ್ರೂಪ್-ಡಿ ವೃಂದದ ನೌಕರರ ವರ್ಗಾವಣೆ ಬಗ್ಗೆ.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ: ಹಿಂವಕ 117 ಬಿಇಟಿ 2022 ದಿನಾಂಕ:07/05/2022

**********

ಉಲ್ಲೇಖದ ಸರ್ಕಾರದ ಆದೇಶದಲ್ಲಿ 2022-23 ನೇ ಸಾಲಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿನ ಗ್ರೂಪ್-ಡಿ ವೃಂದದ ನೌಕರರ ವರ್ಗಾವಣೆ ಬಗ್ಗೆ ಮಾರ್ಗಸೂಚಿಯನ್ನು ಹೊರಡಿಸಲಾಗಿರುತ್ತದೆ.ಅದರಂತೆ ಇಲಾಖೆಯಲ್ಲಿ ಈ ಕೆಳಕಂಡ ವೃಂದಗಳಲ್ಲಿ ದಿನಾಂಕ:15.05.2022 ರ ಅಂತ್ಯಕ್ಕೆ ಖಾಲಿ ಇರುವ ಹುದ್ದೆಗಳ ವಿವರಗಳನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ ಬೆಳಗಾವಿ ಇವರ ವೆಬ್ ಸೈಟ್ ವಿಳಾಸ:www.zpbelagavi.kar.nic.in ನಲ್ಲಿ ಪ್ರಕಟಿಸಲಾಗಿದೆ.

1.ಅಡುಗೆಯವರು
2.ಅಡುಗೆ ಸಹಾಯಕರು
3.ರಾತ್ರಿ ಕಾವಲುಗಾರರು

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಗ್ರೂಪ್-ಡಿ ವೃಂದದ ನೌಕರರು ವರ್ಗಾವಣೆ ಕೋರಿ ಮನವಿ ಸಲ್ಲಿಸುವ ಬಗ್ಗೆ ಅನುಸರಿಸಬೇಕಾಗಿರುವ ಕ್ರಮಗಳ ವಿವರ ಕೆಳಕಂಡಂತಿರುತ್ತದೆ.

ವರ್ಗಾವಣೆ ಕೋರಿಕೆ ಮನವಿ ಸಲ್ಲಿಸಲು ದಿನಾಂಕ:31.05.2022 ರವರೆಗೆ ಅವಕಾಶ ನೀಡಲಾಗಿದ್ದು, ವರ್ಗಾವಣೆ ಕೋರಿ ಮನವಿಯನ್ನು ವೆಬ್ ಸೈಟ್‌ನಲ್ಲಿ ಪ್ರಕಟಿಸಿದ ನಿಗಧಿತ ನಮೂನೆಯಲ್ಲಿ ಭರ್ತಿ ಮಾಡಿ ಸಂಬಂಧಪಟ್ಟ ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಗೆ ಪತ್ರ ಮುಖೇನ ಅಥವಾ ಇ-ಮೇಲ್ ಮೂಲಕ ನಿಗಧಿತ ಅವಧಿಯೊಳಗೆ ಸಂಬಂಧಪಟ್ಟ ದಾಖಲಾತಿಗಳೊಂದಿಗೆ ಸಲ್ಲಿಸತಕ್ಕದ್ದು. ದಿನಾಂಕ:31.05.2022 ರ ನಂತರ ಸಲ್ಲಿಸಲಾಗುವ ಮನವಿಗಳನ್ನು ಪರಿಗಣಿಸಲಾಗುವುದಿಲ್ಲ.

ಯಾವುದಾದರೂ ನೌಕರರು ಈಗಾಗಲೇ ವರ್ಗಾವಣೆ ಕೋರಿ ಮನವಿ ಸಲ್ಲಿಸಿದ್ದರೂ ಸಹ ಮತ್ತೊಮ್ಮೆ ತಮ್ಮ ಮನವಿಯನ್ನು ನಿಗಧಿತ ನಮೂನೆಯಲ್ಲಿ ಭರ್ತಿ ಮಾಡಿ ಸಂಬಂಧಪಟ್ಟ ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಗೆ ದಿನಾಂಕ:31.05.2022 ರೊಳಗೆ ಸಲ್ಲಿಸುವುದು.

ನೌಕರರು ತಾಲೂಕಾ ಕಛೇರಿಗೆ ಸಲ್ಲಿಸುವ ವರ್ಗಾವಣೆ ಮನವಿಗಳನ್ನು ಕ್ರೋಢೀಕರಿಸಿ ಪೂರಕ ದಾಖಲಾತಿ ಹಾಗೂ ಅಭಿಪ್ರಾಯದೊಂದಿಗೆ ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ದಿನಾಂಕ: 01/06/2022 ರಂದು ಜಿಲ್ಲಾ ಕಛೇರಿಗೆ ಸಲ್ಲಿಸುವುದು.

ಜಿಲ್ಲಾ ಅಧಿಕಾರಿಗಳು,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
ಬೆಳಗಾವಿ.